ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

## ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ 2026–27ನೆಯ ಸಾಲಿನ ಸಾಂಸ್ಕೃತಿಕ & ಕ್ರೀಡಾ ವೇದಿಕೆಗಳ ಉದ್ಘಾಟನಾ ಸಮಾರಂಭ

**"ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳು ವಿದ್ಯಾರ್ಥಿಗಳ ಶಕ್ತಿ" – ಡಾ.ನಿರಂಜನ್ ವಾನಳ್ಳಿ**

25 ಆಗಸ್ಟ್ 2026ರಂದು ಕೊಳ್ಳೇಗಾಲದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿತ್ತು.

ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ನಿಕಟಪೂರ್ವ ಕುಲಪತಿಗಳು ಹಾಗೂ ಮೈಸೂರು ವಿಶ್ವವಿದ್ಯಾನಿಲದ ಪತ್ರಿಕೋದ್ಯಮ & ಸಮೂಹ ಸಂವಾಹನ ವಿಭಾಗದ ಪ್ರಾಧ್ಯಾಪಕರಾದ ಡಾ.ನಿರಂಜನ್ ವಾನಳ್ಳಿ ಅವರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟನೆಯನ್ನು ನೆರವೇರಿಸಿದರು. ಜನರು ಪ್ರಸ್ತುತ ನಗರ ಪ್ರದೇಶದತ್ತ ಮುಖ ಮಾಡುತ್ತಿದ್ದಾರೆ. ಆದರೆ ಗ್ರಾಮೀಣ ಪ್ರದೇಶದ ಬದುಕು ನೆಮ್ಮದಿಯ ಬದುಕಾಗಿದೆ. ವಿದ್ಯಾರ್ಥಿಗಳಲ್ಲಿ ಶಿಸ್ತು, ಸಂಯಮ ಮುಖ್ಯ. ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನ ನೀಡುವುದರ ಜೊತೆಗೆ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳು ಎಲ್ಲರ ಬದುಕಿನ ಭಾಗವಾಗಬೇಕು. ಅದು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಅತ್ಯಗತ್ಯ. ಕೇವಲ ಅಂಕ ಗಳಿಸುವುದಷ್ಟೇ ಜೀವನವಲ್ಲ. ಕಲೆ ಮತ್ತು ಕ್ರೀಡೆಗಳು ಮನಸ್ಸನ್ನು ಸದಾ ಉತ್ಸಾಹದಿಂದ ಇಡುತ್ತವೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಾಷ್ಟ್ರೀಯ ಥ್ರೋಬಾಲ್ ಹಾಗೂ ಬಾಸ್ಕೆಟ್ ಬಾಲ್ ಆಟಗಾರ್ತಿ ಮೈಸೂರಿನ ಶ್ರೀಮತಿ ಬಿಂದಿಯಾ ಗುರುಸ್ವಾಮಿ ಅವರು ಮಾತನಾಡಿ ತಾನು ಜೆಎಸ್‌ಎಸ್ ಸಂಸ್ಥೆಯ ಹಿರಿಯ ವಿದ್ಯಾರ್ಥಿಯಾಗಿದ್ದು ನನ್ನ ಸಾಧನೆಗೆ ತಂದೆ, ತಾಯಿ, ಗುರುಗಳ ಹಾಗೂ ಜೆಎಸ್‌ಎಸ್ ಸಂಸ್ಥೆಯ ಸಹಕಾರವಿದೆ. ಜೆಎಸ್‌ಎಸ್ ಸಂಸ್ಥೆಯು ವಿದ್ಯಾರ್ಥಿಗಳ ಪ್ರತಿಭೆಯನ್ನು ಪ್ರೋತ್ಸಾಹಿಸಲು ಸದಾ ಸಿದ್ಧವಿದೆ. ಪುಸ್ತಕದ ಜ್ಞಾನದ ಜೊತೆಗೆ ಕಲೆ ಹಾಗೂ ಕ್ರೀಡೆಗಳು ಮುಖ್ಯ. ಅವು ಮಾನವೀಯತೆ ಮತ್ತು ಸೃಜನಶೀಲತೆಯನ್ನು ಬೆಳೆಸುತ್ತವೆ. ಆದ್ದರಿಂದ ಮುಂಬರುವ ದಿನಗಳಲ್ಲಿ ವಿದ್ಯಾರ್ಥಿಗಳು ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುವಂತೆ ಸಿದ್ಧರಾಗಬೇಕು ಎಂದು ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಹಿರಿಯ ಪ್ರಾಧ್ಯಾಪಕರು ಹಾಗೂ ಮೈಸೂರು ವಿಶ್ವವಿದ್ಯಾನಿಲಯ(ಮೌಲ್ಯಮಾಪನ) ನಿಕಟ ಪೂರ್ವ ಕುಲಸಚಿವರಾದ ಡಾ.ನಾಗರಾಜು ಎನ್ ಇವರು ಮಾತನಾಡಿ ಸಂಸ್ಕೃತಿ ಎಂದರೆ ಕೇವಲ ಹಬ್ಬ–ಹರಿದಿನಗಳಲ್ಲ, ಅದು ನಮ್ಮ ಜೀವನ ವಿಧಾನ. ಕಲೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳು ನಮ್ಮ ದೇಶದ ಭವ್ಯ ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಮಾಧ್ಯಮಗಳು. ಕ್ರೀಡೆ ಮತ್ತು ಸಾಂಸ್ಕೃತಿಕ ವೇದಿಕೆಯು ವಿದ್ಯಾರ್ಥಿಗಳನ್ನು ಡಿಜಿಟಲ್ ಪ್ರಪಂಚದಿಂದ ಹೊರತಂದು, ನಿಜವಾದ ಮೈದಾನ ಮತ್ತು ವೇದಿಕೆಯ ಮೇಲೆ ತಮ್ಮ ಶಕ್ತಿಯನ್ನು ಪ್ರದರ್ಶಿಸಲು ಇರುವ ಸುವರ್ಣ ಅವಕಾಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಪ್ರಾಂಶುಪಾಲರಾದ ಡಾ.ಹೆಚ್.ಎಸ್.ಕೊಂಗಳಪ್ಪ ಅವರು ಮಾತನಾಡಿ ಕಲೆ ಮತ್ತು ಸಂಸ್ಕೃತಿ ಜೀವನದ ಒಂದು ಭಾಗ. ವಿದ್ಯಾರ್ಥಿಗಳಲ್ಲಿ ಅಡಗಿರುವ ಕ್ರೀಡಾ ಮತ್ತು ಕಲಾ ಪ್ರತಿಭೆಯನ್ನು ಗುರುತಿಸಬೇಕು. ಶಿಕ್ಷಣದ ಜೊತೆಗ ಪಠ್ಯೇತರ ಚಟುವಟಿಕೆಗಳು ದೇಹ ಹಾಗೂ ಮನಸ್ಸಿನ ವಿಕಾಸಕ್ಕೆ ಮುಖ್ಯ ಬುನಾದಿಯಾಗಿವೆ. ಜೀವನದಲ್ಲಿ ಗೆಲವು ಮುಖ್ಯವಲ್ಲ. ಸ್ಪರ್ಧೆಗಳಲ್ಲಿ ಭಾಗವಹಿಸುವಿಕೆ ಮುಖ್ಯ. ಜೀವನದಲ್ಲಿ ಸೋತಾಗ ಮುನ್ನಡೆಯುವ ಶಕ್ತಿಯನ್ನು ನಮಗೆ ಕ್ರೀಡೆ ನೀಡುತ್ತದೆ ಎಂದು ತಿಳಿಸಿದರು.

ವೇದಿಕೆಯಲ್ಲಿ ಶ್ರೀಮತಿ ಆರ್.ಪಿ.ಸೌಮ್ಯ, ಸಂಚಾಲಕರು, ಸಾಂಸ್ಕೃತಿಕ ವೇದಿಕೆ ಹಾಗೂ ಶ್ರೀ. ಶ್ರೀಧರ್ ದೈಹಿಕ ಶಿಕ್ಷಣ ನಿರ್ದೇಶಕರು ಉಪಸ್ಥಿತರಿದ್ದರು.

ಮಧ್ಯಾಹ್ನದ ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಯಿತು.



ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ನಿಕಟಪೂರ್ವ ಕುಲಪತಿಗಳು ಹಾಗೂ ಮೈಸೂರು ವಿಶ್ವವಿದ್ಯಾನಿಲದ ಪತ್ರಿಕೋಧ್ಯಮ & ಸಮೂಹ ಸಂವಾಹನ ವಿಭಾಗದ ಪ್ರಾಧ್ಯಾಪಕರಾದ ಡಾ.ನಿರಂಜನ್ ವಾನಳ್ಳಿ ರವರು 2026-27ನೆಯ ಸಾಲಿನ ಸಾಂಸ್ಕೃತಿಕ & ಕ್ರೀಡಾ ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸುತ್ತಿರುವುದು. ಚಿತ್ರದಲ್ಲಿ ಶ್ರೀ ಶ್ರೀಧರ್ ಎಸ್, ದೈಹಿಕ ಶಿಕ್ಷಣ ನಿರ್ದೇಶಕರು, ಪ್ರಾಂಶುಪಾಲರಾದ ಡಾ.ಹೆಚ್.ಎಸ್. ಕೊಂಗಳಪ್ಪ, ಹಿರಿಯ ಪ್ರಾಧ್ಯಾಪಕರು ಹಾಗೂ ಮೈಸೂರು ವಿಶ್ವವಿದ್ಯಾನಿಲಯ(ಮೌಲ್ಯಮಾಪನ) ನಿಕಟ ಪೂರ್ವ ಕುಲಸಚಿವರಾದ ಡಾ.ನಾಗರಾಜು ಎನ್, ರಾಷ್ಟ್ರೀಯ ಥ್ರೋಬಾಲ್ ಹಾಗೂ ಬಾಸ್ಕೆಟ್ ಬಾಲ್ ಆಟಗಾರ್ತಿ ಮೈಸೂರಿನ ಶ್ರೀಮತಿ ಬಿಂದಿಯಾ ಗುರುಸ್ವಾಮಿ, ಶ್ರೀಮತಿ ಆರ್ ಪಿ ಸೌಮ್ಯ, ಸಂಚಾಲಕರು, ಸಾಂಸ್ಕೃತಿಕ ವೇದಿಕೆ ಇವರನ್ನು ಕಾಣಬಹುದು



ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ನಿಕಟಪೂರ್ವ ಕುಲಪತಿಗಳು ಹಾಗೂ ಮೈಸೂರು ವಿಶ್ವವಿದ್ಯಾನಿಲದ ಪತ್ರಿಕೋಧ್ಯಮ & ಸಮೂಹ ಸಂವಾಹನ ವಿಭಾಗದ ಪ್ರಾಧ್ಯಾಪಕರಾದ ಡಾ.ನಿರಂಜನ್ ವಾನಳ ಉಧ್ಘಾಟನಾ ಭಾಷಣ ಮಾಡುತ್ತಿರುವುದು. ಚಿತ್ರದಲ್ಲಿ ಶ್ರೀ ಶ್ರೀಧರ್ ಎಸ್, ದೈಹಿಕ ಶಿಕ್ಷಣ ನಿರ್ದೇಶಕರು, ಪ್ರಾಂಶುಪಾಲರಾದ ಡಾ.ಹೆಚ್.ಎಸ್. ಕೊಂಗಳಪ್ಪ, ಮೈಸೂರು ವಿಶ್ವವಿದ್ಯಾನಿಲಯ(ಮೌಲ್ಯಮಾಪನ) ನಿಕಟ ಪೂರ್ವ ಕುಲಸಚಿವರಾದ ಡಾ.ನಾಗರಾಜು ಎನ್, ರಾಷ್ಟ್ರೀಯ ಥ್ರೋಬಾಲ್ ಹಾಗೂ ಬಾಸ್ಕೆಟ್ ಬಾಲ್ ಆಟಗಾರ್ತಿ ಮೈಸೂರಿನ ಶ್ರೀಮತಿ ಬಿಂದಿಯಾ ಗುರುಸ್ವಾಮಿ, ಶ್ರೀಮತಿ ಆರ್ ಪಿ ಸೌಮ್ಯ, ಸಂಚಾಲಕರು, ಸಾಂಸ್ಕೃತಿಕ ವೇದಿಕೆ ಇವರನ್ನು ಕಾಣಬಹುದು



ಮೈಸೂರು ವಿಶ್ವವಿದ್ಯಾನಿಲಯ(ಮೌಲ್ಯಮಾಪನ) ನಿಕಟ ಪೂರ್ವ ಕುಲಸಚಿವರಾದ ಡಾ.ನಾಗರಾಜು ಎನ್, ರವರು ಅಧ್ಯಕ್ಷೀಯ ಭಾಷಣ ಮಾಡುತ್ತಿರುವುದು. ಚಿತ್ರದಲ್ಲಿ ಶ್ರೀ ಶ್ರೀಧರ್ ಎಸ್, ದೈಹಿಕ ಶಿಕ್ಷಣ ನಿರ್ದೇಶಕರು, ಪ್ರಾಂಶುಪಾಲರಾದ ಡಾ.ಹೆಚ್.ಎಸ್. ಕೊಂಗಳಪ್ಪ, ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ನಿಕಟಪೂರ್ವ ಕುಲಪತಿಗಳು ಹಾಗೂ ಮೈಸೂರು ವಿಶ್ವವಿದ್ಯಾನಿಲದ ಪತ್ರಿಕೋಧ್ಯಮ & ಸಮೂಹ ಸಂವಾಹನ ವಿಭಾಗದ ಪ್ರಾಧ್ಯಾಪಕರಾದ ಡಾ.ನಿರಂಜನ್ ವಾನಳ್ಳಿ, ರಾಷ್ಟ್ರೀಯ ಥ್ರೋಬಾಲ್ ಹಾಗೂ ಬಾಸ್ಕೆಟ್ ಬಾಲ್ ಆಟಗಾರ್ತಿ ಮೈಸೂರಿನ ಶ್ರೀಮತಿ ಬಿಂದಿಯಾಗುರುಸ್ವಾಮಿ, ಶ್ರೀಮತಿ ಆರ್ ಪಿ ಸೌಮ್ಯ, ಸಂಚಾಲಕರು, ಸಾಂಸ್ಕೃತಿಕ ವೇದಿಕೆ ಇವರನ್ನು ಕಾಣಬಹುದು.